# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | **272(2181)** |
| ಮಾನ್ಯ ಸದಸ್ಯರ ಹೆಸರು | ಶ್ರೀ ಯು. ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 18.03.2022 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಿಗೆ ಸರಬರಾಜು ಮಾಡುವ ಆಹಾರ ಸಾಮಾಗ್ರಿ ಖರೀದಿ ಟೆಂಡರ್‌ನಲ್ಲಿ ಕಡಿಮೆ ದರ ನಮೂದಿಸಿ ಅವ್ಯವಹಾರ ನಡೆಸಲು ಮುಂದಾಗಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಬಂದಿದ್ದಲ್ಲಿ; ಈ ಬಗ್ಗೆ ಇಲಾಖಾ ತನಿಖೆ ನಡೆಸಲಾಗಿದೆಯೇ; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಹಾಗೂ ಆಶ್ರಮ ಶಾಲೆಗಳಿಗೆ ಆಹಾರ ಪದಾರ್ಥಗಳ ಬೇಡಿಕೆ ಮತ್ತು ಸರಬರಾಜಿನಲ್ಲಿ ಉಂಟಾಗಿರುವ ಲೋಪದೋಷಗಳು ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ ಹಿಂವಕ 716 ಬಿಎಂಎಸ್ 2021, ದಿ:02-12-2021ರಂತೆ ಡಾ. ಆರ್. ಸುಬ್ರಾನಾಯಕ್, ಅಂದಿನ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ತುಮಕೂರು ಜಿಲ್ಲೆ ಹಾಗೂ ಶ್ರೀ ಹೆಚ್. ಬಿ ವಿನೋದ್ ಕುಮಾರ್, ಅಂದಿನ ಕಛೇರಿ ಮೇಲ್ವಿಚಾರಕ, ಜಿಲ್ಲಾ ಹಿಂದುಳಿದ ವರ್ಗಗಳ ಜಿಲ್ಲಾ ಅಧಿಕಾರಿಗಳ ಕಛೇರಿ, ತುಮಕೂರು ಜಿಲ್ಲೆ ಇವರನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ ಅಮಾನತ್ತುಗೊಳಿಸಲಾಗಿತ್ತು.<br>ಮುಂದುವರೆದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ತುಮಕೂರು ರವರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಹಾಗೂ ಆಶ್ರಮ ಶಾಲೆಗಳಿಗೆ ಆಹಾರ ಪದಾರ್ಥಗಳ ಬೇಡಿಕೆ ಮತ್ತು ಸರಬರಾಜಿನಲ್ಲಿ ಉಂಟಾಗಿರುವ ಲೋಪದೋಷಗಳ ಬಗ್ಗೆ ವಿವರವಾದ ಮಾಹಿತಿಯನ್ನು ಒದಗಿಸುವಂತೆ ದಿನಾಂಕ:20.12.2021ರಂದು ಕೋರಲಾಗಿತ್ತು. ಅದರಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ತುಮಕೂರು ಜಿಲ್ಲೆ ಇವರು ದಿನಾಂಕ:15.03.2022ರಲ್ಲಿ ಮಾಹಿತಿಯನ್ನು ಸಲ್ಲಿಸಿದ್ದು, ನಿಯಮಾನುಸಾರ ದೋಷರೋಪಣ ಪಟ್ಟಿ (ಅನುಬಂಧ 1 ರಿಂದ 4) ನ್ನು ಜಾರಿ ಮಾಡಲು ಕ್ರಮವಹಿಸಲಾಗುತ್ತಿದೆ. |
| ಇ) | ಈ ಅವ್ಯವಹಾರದಲ್ಲಿ ಶಾಮೀಲಾಗಿರುವ ಹಾಗೂ ಆಹಾರ ಪೂರೈಕೆ ದರ ಪಟ್ಟಿಗೆ ಅನುಮೋದಿಸಿರುವ ಅಧಿಕಾರಿ ನೌಕರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

**ಸಂಖ್ಯೆ: ಹಿಂವಕ 225 ಬಿಎಂಎಸ್ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು